ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ. ಯವರ ನ್ಯಾಯಾಲಯ , ಕುಂದಾಪುರ

ಸಿ.ಸಿ. ನಂಬ್ರ: 2119/2018

ಚಾಸಾ: 31 ಪ್ರಾಸಾ:15

ದಿನಾಂಕ: 13.02.2026

| | | |
|---|---|---|
| ವಾಗ್ಮೂಲದವರ ಹೆಸರು | : | ಶ್ರೀ ಶ್ರೀಧರ ಯು. |
| ತಂದೆಯ ಹೆಸರು | : | ರಾಮ |
| ವಯಸ್ಸು | : | 59 ವರ್ಷ |
| ಉದ್ಯೋಗ | : | ಎ ಎಸ್ ಐ |
| ವಾಸ ಸ್ಥಳ | : | ಹೆಬ್ರಿ |

ಸಾಕ್ಷಿಯನ್ನು ಪ್ರಮಾಣೀಕರಿಸಲಾಯಿತು.

**ಮುಖ್ಯ ವಿಚಾರಣೆ: ಮಾನ್ಯ ಸ.ಸ.ಅ.ರವರಿಂದ:**

ನಾನು 2017 ರಿಂದ 2021ರವರೆಗೆ ಕುಂದಾಪುರದ ಸಂಚಾರಿ ಪೊಲೀಸ್ ಠಾಣೆಯಲ್ಲಿ ಎ ಎಸ್ ಐ ಆಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

ದಿನಾಂಕ 16.07.2018 ರಂದು ಪ್ರಕರಣದಲ್ಲಿ ಕಿರಣ್ ಶೆಟ್ಟಿ ರವರು ಮೃತಪಟ್ಟ ಮೇರೆಗೆ ಪಂಚರಾದ ಚಾಸ.17 ರಿಂದ 22 ರವರ ಸಮಕ್ಷಮ ಶವ ಪಂಚನಾಮೆಯನ್ನು ಬೆಳಿಗ್ಗೆ 9 ರಿಂದ 11 ಗಂಟೆಯವರೆಗೂ ಜರುಗಿಸಿ ವೈದ್ಯಕೀಯ ಪರೀಕ್ಷೆಗೆ ಹಾಜರುಪಡಿಸಿರುತ್ತೇನೆ.

ದಿ: 19.07.2018 ರಂದು ಚಾಸಾ.33 ರವರ ಆದೇಶದಂತೆ ಗಾಯಾಳು ಅರುಣ್ ಶೆಟ್ಟಿ ರವರ ಹೇಳಿಕೆಯನ್ನು ಕೆ ಎಮ್ ಸಿ ಮಣಿಪಾಲ ಆಸ್ಪತ್ರೆಯಿಂದ ಪಡೆದಿರುತ್ತೇನೆ.

ಸಾಕ್ಷಿ ನಿಪಿ-14 ರಲ್ಲಿ ತನ್ನ ಸಹಿಗಳನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ-14(ಎ) ಎಂದು ಗುರುತಿಸಲಾಯಿತು.

**ಪಾಟೀ ಸವಾಲು: ಆರೋಪಿತರ ಪರ ವಕೀಲರಿಂದ:**

ನಾನು ಶವ ಪಂಚನಾಮೆಯನ್ನು ಜರುಗಿಸಿ ಸಾಕ್ಷಿದಾರರ ಹೇಳಿಕೆ ಪಡೆದಿಲ್ಲ ಎಂದರೆ ಸರಿಯಲ್ಲ.

**ಮರು ವಿಚಾರಣೆ: ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓದಿ ಹೇಳಿ ಕೇಳಿ ಸರಿ ಇದೆ

Sd/-

ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು
ಪ್ರ. ದ. ನ್ಯಾ. ದಂ. ಕುಂದಾಪುರ